ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ರಾಜ್ಯದ ಅಂಗನವಾಡಿ ಕೇಂದ್ರಗಳ ಬಗ್ಗೆ

ಶ್ರೀ ಟಿ. ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-

ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-

051 (438+362) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ಮತ್ತು ಅವುಗಳಲ್ಲಿ ಸ್ವಂತ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೇಂದ್ರಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸ್ವಂತ ಕಟ್ಟಡಗಳಿಲ್ಲದೇ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಯಾವ ರೀತಿ ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಅವು ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಟ್ಟಡಗಳಿಲ್ಲದಿರುವ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆಯನ್ನು ಹೇಗೆ ಕಲ್ಪಿಸಲಾಗಿದೆ ;

(ಈ) ಕಟ್ಟಡಗಳಿಲ್ಲದಿರುವ ಅಂಗನವಾಡಿ ಕೇಂದ್ರಗಳಲ್ಲಿ ಆಹಾರ ಪದಾರ್ಥಗಳನ್ನು ಶೇಖರಿಸಿಡಲು ಸಾಧ್ಯವಾಗದೇ ವಾಪಸ್ ಕಳುಹಿಸುತ್ತಿರುವ ಪ್ರಸಂಗಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಇವುಗಳ ಉನ್ನತೀಕರಣಕ್ಕೆ ಸರ್ಕಾರವು ಕೈಗೊಂಡ ಕ್ರಮಗಳಾವುವು;

(ಊ) 2019-20ನೇ ಸಾಲಿನಲ್ಲಿ ಎಷ್ಟು ಅಂಗನವಾಡಿಗಳಿಗೆ ಕಟ್ಟಡ ನಿರ್ಮಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಋ) 2020-21ನೇ ಸಾಲಿನಲ್ಲಿ ಎಷ್ಟು ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ?